# ಮೇಲ್ಮನೆ ಚುನಾವಣೆಗೆ ಇಂದು ಮತದಾನ

**ಬೆಂಗಳೂರು:** ವಿಧಾನಪರಿಷತ್ತಿನ ಬೆಂಗಳೂರು ಶಿಕ್ಷಕರ ಕ್ಷೇತ್ರ, ಆಗ್ನೇಯ ಪದವೀಧರ ಕ್ಷೇತ್ರ, ಪಶ್ಚಿಮ ಪದವೀಧರ ಕ್ಷೇತ್ರ ಹಾಗೂ ಈಶಾನ್ಯ ಶಿಕ್ಷಕರ ಕ್ಷೇತ್ರಗಳ ಚುನಾವಣೆಗೆ ಇಂದು (ಅ.28) ಮತದಾನ ನಡೆಯಲಿದೆ.

ನಾಲ್ಕು ಕ್ಷೇತ್ರಗಳ 492 ಭಾಗಗಳ 549 ಮತಗಟ್ಟೆಗಳಲ್ಲಿ ಬೆಳಗ್ಗೆ 8ರಿಂದ ಸಂಜೆ 5ರ ತನಕ ಮತದಾನ ನಡೆಯಲಿದೆ. ಬಿಜೆಪಿ, ಕಾಂಗ್ರೆಸ್ ಹಾಗೂ ಜೆಡಿಎಸ್ ಪಕ್ಷದ ಅಭ್ಯರ್ಥಿಗಳು ಸೇರಿ ವಿವಿಧ ಪಕ್ಷಗಳು ಹಾಗೂ ಪಕ್ಷೇತರರು ಸೇರಿ ಕಣದಲ್ಲಿರುವ 40 ಮಂದಿ ಅಭ್ಯರ್ಥಿಗಳ ಭವಿಷ್ಯವನ್ನು 2.34 ಲಕ್ಷ ಮತದಾರರು ಬರೆಯಲಿದ್ದಾರೆ.

ಬಿಜೆಪಿ, ಕಾಂಗ್ರೆಸ್‌ನ ತಲಾ ನಾಲ್ವರು ಅಭ್ಯರ್ಥಿಗಳು, ಪಶ್ಚಿಮ ಪದವೀಧರ ಕ್ಷೇತ್ರದ ಜೆಡಿಎಸ್ ಅಭ್ಯರ್ಥಿ ಕಣದಿಂದ ನಿವೃತ್ತಿ ಘೋಷಿಸಿದ್ದು, ಈ ಕ್ಷೇತ್ರದಲ್ಲಿ ಜೆಡಿಎಸ್ ಪಕ್ಷೇತರ ಅಭ್ಯರ್ಥಿಯನ್ನು ಬೆಂಬಲಿಸಿದೆ. ಉಳಿದ ಮೂರು ಕ್ಷೇತ್ರಗಳಲ್ಲಿ ಪಕ್ಷದ ಅಧಿಕೃತ ಅಭ್ಯರ್ಥಿಗಳು ಕಣದಲ್ಲಿ ಉಳಿದಿದ್ದಾರೆ. ಇದಲ್ಲದೆ ವಿವಿಧ ನೊಂದಾಯಿತ ರಾಜಕೀಯ ಪಕ್ಷಗಳ 6 ಅಭ್ಯರ್ಥಿಗಳು, ಪಕ್ಷೇತರ 22 ಮಂದಿ ಅಖಾಡದಲ್ಲಿದ್ದಾರೆ. ಬೆಂಗಳೂರು ಶಿಕ್ಷಕರ ಕ್ಷೇತ್ರದಲ್ಲಿ 11, ಈಶಾನ್ಯ ಶಿಕ್ಷಕರ ಕ್ಷೇತ್ರದಲ್ಲಿ 5, ಆಗ್ನೇಯ ಪದವೀಧರ ಕ್ಷೇತ್ರದಲ್ಲಿ 15 ಹಾಗೂ ಪಶ್ಚಿಮ ಪದವೀಧರ ಕ್ಷೇತ್ರದಲ್ಲಿ 11 ಅಭ್ಯರ್ಥಿಗಳು ಸ್ಪರ್ಧಿಸಿದ್ದಾರೆ.

ಬೆಂಗಳೂರು ಶಿಕ್ಷಕರ ಕ್ಷೇತ್ರದಲ್ಲಿ 22,089, ಈಶಾನ್ಯ ಶಿಕ್ಷಕರ ಕ್ಷೇತ್ರದಲ್ಲಿ 29,234, ಆಗ್ನೇಯ ಪದವೀಧರ ಕ್ಷೇತ್ರದಲ್ಲಿ 1.09 ಲಕ್ಷ ಹಾಗೂ ಪಶ್ಚಿಮ ಪದವೀಧರ ಕ್ಷೇತ್ರದಲ್ಲಿ 74,268 ಮತದಾರರು ಇದ್ದಾರೆ.

**ಪರ್ಯಾಯ ದಾಖಲೆಗಳು:** ಮತದಾರರ ಗುರುತಿನ ಚೀಟಿ (ಎಪಿಕ್ ಕಾರ್ಡ್) ಇಲ್ಲದಿದ್ದರೆ ಆಧಾರ್ ಕಾರ್ಡ್, ಡ್ರೈವಿಂಗ್ ಲೈಸೆನ್ಸ್, ಪ್ಯಾನ್ ಕಾರ್ಡ್, ಪಾಸ್‌ಪೋರ್ಟ್, ರಾಜ್ಯ-ಕೇಂದ್ರ ಸರ್ಕಾರ, ಸಾರ್ವಜನಿಕ ಉದ್ದಿಮೆ, ಸ್ಥಳೀಯ ಸಂಸ್ಥೆ ಅಥವಾ ಖಾಸಗಿ ಕೈಗಾರಿಕೆಗಳು ಉದ್ಯೋಗಿಗಳಿಗೆ ನೀಡುವ ಗುರುತಿನ ಚೀಟಿ, ಸಂಸದರು, ಶಾಸಕರು, ವಿಧಾನಪರಿಷತ್ ಸದಸ್ಯರಿಗೆ ನೀಡಲಾಗುವ ಅಧಿಕೃತ ಗುರುತಿನ ಚೀಟಿ ಹಾಜರುಪಡಿಸಿ ಮತದಾನ ಮಾಡಬಹುದು.

## ವಿಶೇಷ ರಜೆ

**ಬೆಂಗಳೂರು:** ವಿಧಾನಪರಿಷತ್ತಿನ ಆಗ್ನೇಯ ಪದವೀಧರ, ಪಶ್ಚಿಮ ಪದವೀಧರ, ಬೆಂಗಳೂರು ಶಿಕ್ಷಕರ ಕ್ಷೇತ್ರ ಹಾಗೂ ಈಶಾನ್ಯ ಶಿಕ್ಷಕರ ಕ್ಷೇತ್ರಗಳಿಗೆ ಇಂದು (ಅ.28) ಮತದಾನ ನಡೆಯಲಿರುವ ಹಿನ್ನೆಲೆಯಲ್ಲಿ ಈ ಮತಕ್ಷೇತ್ರಗಳ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಹಾಗೂ ಖಾಸಗಿ ಕಾಲೇಜುಗಳು, ಅನುದಾನಿತ, ಅನುದಾನ ರಹಿತ ಶಿಕ್ಷಣ ಸಂಸ್ಥೆಗಳು, ಎಲ್ಲಾ ಶೈಕ್ಷಣಿಕ ಸಂಸ್ಥೆಗಳು, ರಾಜ್ಯ ಮತ್ತು ಕೇಂದ್ರ ಸರ್ಕಾರದ ಕಚೇರಿಗಳು, ಕಾರ್ಖಾನೆ, ಕೈಗಾರಿಕಾ ಸಂಸ್ಥೆಗಳು, ದಿನಗೂಲಿ ಆಧಾರದ ಮೇಲೆ ಕೆಲಸ ನಿರ್ವಹಿಸುತ್ತಿರುವ ಪದವೀಧರರು ಮತ್ತು ಶಿಕ್ಷಕರಿಗೆ ವಿಶೇಷ ರಜೆ ಘೋಷಿಸಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.